# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 515 |
| ಉತ್ತರಿಸುವ ದಿನಾಂಕ | : | 19.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯದಲ್ಲಿ ಜಾರಿಯಲ್ಲಿರುವ ಕಾರ್ಮಿಕ ನಿಯಮಗಳು ಯಾವುವು; ಕಾರ್ಮಿಕರ ಕೆಲಸದ ಕಾಲಾವಧಿಯೆಷ್ಟು? ಹೆಚ್ಚುವರಿ (ಒ.ಟಿ) ಕೆಲಸಕ್ಕೆ ಹೆಚ್ಚುವರಿ ಭತ್ಯೆ ನೀಡಲು ಅವಕಾಶವಿದೆಯೇ; ತುಟ್ಟಿಭತ್ಯೆಯು ಯಾರಿಗೆ ಅನ್ವಯವಾಗುತ್ತದೆ; ರಾಜ್ಯದ ಬೀಡಿ ಕಾರ್ಮಿಕರಿಗೆ 2017ರಲ್ಲಿ ನಿಗದಿಪಡಿಸಿದ ಕನಿಷ್ಠ ವೇತನ ಹಾಗೂ ಗ್ರಾಹಕ ಸೂಚ್ಯಂಕದಂತೆ ತುಟ್ಟಿಭತ್ಯೆ ನೀಡಲು ಏನು ಕ್ರಮವಹಿಸಲಾಗಿದೆ; (ವಿವರ ನೀಡುವುದು) | • ರಾಜ್ಯ ಕಾರ್ಮಿಕ ಇಲಾಖೆಯ ವತಿಯಿಂದ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ 4 ಕಾಯ್ದೆಗಳು ಸೇರಿದಂತೆ ಒಟ್ಟು 25 ಕಾಯ್ದೆಗಳ ಪ್ರಾವಧಾನಗಳು ಹಾಗೂ ನಿಯಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ (ಕಾಯ್ದೆಗಳು/ ನಿಯಮಗಳ ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ).<br>• ಕನಿಷ್ಠ ವೇತನ ಕಾಯ್ದೆಯನ್ವಯ ದಿನವೊಂದಕ್ಕೆ ಎಂಟು (8) ಗಂಟೆಯ ಕೆಲಸದ ಅವಧಿ ಹಾಗೂ 1 ಗಂಟೆಯ ವಿಶ್ರಾಂತಿಯನ್ನು ಒಳಗೊಂಡಂತೆ ಒಟ್ಟು 9 ಗಂಟೆಗಳ ಕೆಲಸದ ಅವಧಿ ಇರುತ್ತದೆ. ನೌಕರರು ದಿನದ ನಿಗದಿತ ಅವಧಿಗಿಂತ ಹೆಚ್ಚಿನ ಅವಧಿಗೆ ಕೆಲಸ ನಿರ್ವಹಿಸಿದಲ್ಲಿ ಅಂತಹ ಹೆಚ್ಚುವರಿ ಅವಧಿಯ ಕೆಲಸಕ್ಕೆ ಆತನ ವೇತನದ ಎರಡು ಪಟ್ಟು ವೇತನವನ್ನು ಲೆಕ್ಕಾಚಾರ ಮಾಡಿ ಉದ್ಯೋಗದಾತರು ಪಾವತಿಸಬೇಕಿರುತ್ತದೆ.<br>• ಕನಿಷ್ಠ ವೇತನ ಕಾಯ್ದೆಯ ಅನುಸೂಚಿಗೆ ಒಟ್ಟು 81 ಉದ್ದಿಮೆಗಳನ್ನು ಸೇರ್ಪಡೆಗೊಳಿಸಿ, ಕನಿಷ್ಠ ವೇತನ ನಿಗದಿಪಡಿಸಿ, ಕಾಲಕಾಲಕ್ಕೆ ವೇತನ ದರಗಳನ್ನು ಪರಿಷ್ಕರಿಸಲಾಗುತ್ತಿದೆ. ಮುಂದುವರಿದು, ಪ್ರತಿ ವರ್ಷ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯಿಂದ ಸ್ವೀಕೃತವಾಗುವ ಗ್ರಾಹಕ ಬೆಲೆ ಸೂಚ್ಯಂಕಗಳಿಗನುಸಾರವಾಗಿ ಏಪ್ರಿಲ್ 1 ರಿಂದ ಜಾರಿಗೆ ಬರುವಂತೆ ವ್ಯತ್ಯಸ್ಥ ತುಟ್ಟಿಭತ್ಯೆಯನ್ನು ಏರಿಕೆ ಮಾಡಿ ಮೂಲ ವೇತನಕ್ಕೆ ಸೇರಿಸಿ ಪ್ರಕಟಿಸಲಾಗುತ್ತಿದೆ. ಕಾಯ್ದೆಯ ಅನುಸೂಚಿಯಲ್ಲಿರುವ 81 ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ಮಾಡುವ ಎಲ್ಲಾ ಕಾರ್ಮಿಕರಿಗೂ ತುಟ್ಟಿಭತ್ಯೆಯು ಅನ್ವಯವಾಗುತ್ತದೆ.<br><br>1) "ಬೀಡಿ ತಯಾರಿಕೆ" ಅನುಸೂಚಿತ ಉದ್ದಿಮೆಗೆ, ಕನಿಷ್ಠ ವೇತನ ಕಾಯ್ದೆ 1948 ರ ಕಲಂ 5(1)ಎ ರ ಪ್ರಾವಧಾನಗಳನ್ವಯ ರಚಿಸಲಾದ ಸಮಿತಿ ವಿಧಾನದ ಮುಖಾಂತರ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ, ದಿನಾಂಕ: 14.03.2018ರಂದು ಅಧಿಸೂಚನೆಯನ್ನು ಹೊರಡಿಸಲಾಗಿತ್ತು.<br>2) ಸದರಿ ಅಧಿಸೂಚನೆಯನ್ನು ಆಡಳಿತ ವರ್ಗದವರಾದ ಮೆ: ಮಂಗಳೂರು ಗಣೇಶ ಬೀಡಿ ವರ್ಕ್ಸ್, ಮೈಸೂರು ಹಾಗೂ ಮೆ: ಕರ್ನಾಟಕ ಬೀಡಿ ಇಂಡಸ್ಟ್ರೀಸ್ ಅಸೋಸಿಯೇಷನ್, ಮಂಗಳೂರು, ಇವರು ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 8064/2019 ಮತ್ತು 40887/2018 ದಾಖಲಿಸಿರುತ್ತಾರೆ.<br>3) ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯವು ದಿನಾಂಕ: 20.3.2019 ರಂದು ನಡೆದ ವಿಚಾರಣೆಯಲ್ಲಿ "Respondents not to precipitate the matter till the next date of hearing" ಎಂಬುದಾಗಿ ಆದೇಶವನ್ನು ನೀಡಿರುತ್ತದೆ.<br>4) ದಿನಾಂಕ: 14.03.2018 ರಂದು ಹೊರಡಿಸಿದ್ದ ಅಧಿಸೂಚನೆಗೆ ದಿನಾಂಕ:14.3.2023 ಕ್ಕೆ 5 ವರ್ಷ |

| | | |
|---|---|---|
| | | ಪೂರ್ಣಗೊಂಡ ಹಿನ್ನೆಲೆಯಲ್ಲಿ ನಿಯಮಾನುಸಾರ ವೇತನ ಪರಿಷ್ಕರಣೆಗಾಗಿ ಸರ್ಕಾರವು ಕಾಯ್ದೆಯ ಕಲಂ 5(1)ಎ ರ ಪ್ರಾವಧಾನಗಳನ್ವಯ ಉಪಸಮಿತಿಯನ್ನು ರಚಿಸಿ ದಿನಾಂಕ: 20.09.2023 ರಂದು ಆದೇಶ ಹೊರಡಿಸಿರುತ್ತದೆ.<br>5) ಉಪಸಮಿತಿಯ ಮೊದಲ ಸಭೆಯನ್ನು ದಿನಾಂಕ: 15.03.2024 ರಂದು ನಡೆಸಿ ಚರ್ಚಿಸಲಾಗಿದ್ದು, ಎರಡನೇ ಸಭೆಯನ್ನು ದಿನಾಂಕ: 19.7.2024 ರಂದು ಆಯೋಜಿಸಿ ಸೂಚನಾ ಪತ್ರ ಜಾರಿ ಮಾಡಲಾಗಿರುತ್ತದೆ. |
| ಆ) | ಕರ್ನಾಟಕ ರಾಜ್ಯದಲ್ಲಿ ಕನಿಷ್ಟ ವೇತನ ನಿಯಮಗಳು ಯಾವುವು; ಅವು ಯಾರಿಗೆಲ್ಲ ಅನ್ವಯವಾಗುತ್ತವೆ; ಯಾವ ಪ್ರಕಾರದ ಕೆಲಸಗಾರರಿಗೆ ಈ ನಿಯಮಗಳು ಅನ್ವಯಿಸುವುದಿಲ್ಲ; (ವಿವರ ನೀಡುವುದು) | ರಾಜ್ಯದಲ್ಲಿ ಕನಿಷ್ಠ ವೇತನ ಕಾಯ್ದೆಗೆ ಸಂಬಂಧಿಸಿದ ಕನಿಷ್ಠ ವೇತನ ನಿಯಮಗಳು-1958 ಅನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಕನಿಷ್ಠ ವೇತನ ಕಾಯ್ದೆಯ ಕಲಂ 2 (i) ರಡಿ "ಕಾರ್ಮಿಕ" ಪದದ ವ್ಯಾಖ್ಯಾನಕ್ಕೆ ಒಳಪಡುವ ಎಲ್ಲಾ ನೌಕರರಿಗೆ ಮತ್ತು ಕಾರ್ಮಿಕರಿಗೆ ಅನ್ವಯವಾಗುತ್ತದೆ. ಈ ನಿಯಮಗಳು, ಗೌರವಧನದ ಆಧಾರದಲ್ಲಿ ಕೆಲಸ ಮಾಡುವ ನೌಕರರು, ಸರ್ಕಾರಿ ನೌಕರರು, ಸ್ವಯಂ ಉದ್ಯೋಗಿಗಳು ಹಾಗೂ ಶಿಕ್ಷಕ ವೃತ್ತಿಯಲ್ಲಿರುವ ನೌಕರರಿಗೆ ಅನ್ವಯಿಸುವುದಿಲ್ಲ. |
| ಇ) | ರಾಜ್ಯದಲ್ಲಿ ಕನಿಷ್ಟ ವೇತನ ನಿಯಮಗಳು ಅನ್ವಯಿಸುವ ಒಟ್ಟು ಕೆಲಸಗಾರರ ಸಂಖ್ಯೆ ಎಷ್ಟು; ಯಾವ ಪ್ರಕಾರದ ಕೆಲಸಗಾರರಿಗೆ ಈ ನಿಯಮಗಳು ಅನ್ವಯಿಸುವುದಿಲ್ಲ; (ವಿವರ ನೀಡುವುದು) | ಕನಿಷ್ಠ ವೇತನ ನಿಯಮಗಳು ಅನ್ವಯಿಸುವ ಹಾಗೂ ನಿಯಮದಿಂದ ಹೊರಗುಳಿದ ಕಾರ್ಮಿಕರ ಸಂಖ್ಯೆಯ ಕುರಿತು ಸರ್ಕಾರವು ಈವರೆಗೆ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದಾಗ್ಯೂ, ವಿವಿಧ ಕಾರ್ಮಿಕ ಕಾಯ್ದೆಗಳಡಿ ಸಂಸ್ಥೆಗಳು ನೊಂದಾಯಿಸುವ ಹಾಗೂ ನವೀಕರಣದ ಸಂದರ್ಭದಲ್ಲಿ ಒದಗಿಸುವ ಕಾರ್ಮಿಕರ ಸಂಖ್ಯೆ ಹಾಗೂ ಇಲಾಖೆಯ ಅಧೀನದ ಮಂಡಳಿಗಳಲ್ಲಿ ವಿವಿಧ ಯೋಜನೆಗಳಡಿ ನೊಂದಾಯಿಸಿಕೊಂಡಿರುವ ಕಾರ್ಮಿಕರ ಸಂಖ್ಯೆಯು ಈ ಕೆಳಕಂಡಂತಿರುತ್ತದೆ.<br><br>ಕರ್ನಾಟಕ ಅಂಗಡಿ & ವಾಣಿಜ್ಯ ಸಂಸ್ಥೆಗಳ ಕಾಯ್ದೆ — 66,20,000<br>ಬೀಡಿ ಮತ್ತು ಸಿಗಾರ್ ಕಾಯ್ದೆ — 1,06,391<br>ತೋಟ ಕಾರ್ಮಿಕರ ಕಾಯ್ದೆ — 8,640<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆ — 38,44,151<br>ಕಾರ್ಖಾನೆಗಳ ಕಾಯ್ದೆ — 18,48,985<br>ಗುತ್ತಿಗೆ ಕಾರ್ಮಿಕರ ಕಾಯ್ದೆ — 22,59,609<br>ಒಟ್ಟು — 1,46,87,776<br><br>ಮೇಲ್ಕಂಡ ಎಲ್ಲಾ ನೋಂದಾಯಿತ ಕಾರ್ಮಿಕರಿಗೆ ಕನಿಷ್ಠ ವೇತನ ಕಾಯ್ದೆ ಹಾಗೂ ನಿಯಮಗಳು ಅನ್ವಯಿಸುತ್ತವೆ. |
| ಈ) | ಕನಿಷ್ಟ ವೇತನ ವ್ಯಾಖ್ಯಾನ (ಡೆಫಿನೇಷನ್) ಸಂಕುಚಿತವಾಗಿರುವ ಕಾರಣ ಹೆಚ್ಚು ಸಂಖ್ಯೆಯ ಕಾರ್ಮಿಕರು ಕನಿಷ್ಟ ವೇತನ ಭದ್ರತೆಯಿಂದ ಹೊರಗುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಹೌದು.<br><br>ಕನಿಷ್ಠ ವೇತನ ಕಾಯ್ದೆಯ ಕಲಂ 2 (i) ರ "ಕಾರ್ಮಿಕ" ಪದದ ವ್ಯಾಖ್ಯಾನದಡಿ ವೇತನಕ್ಕಾಗಿ ಕೆಲಸ ನಿರ್ವಹಿಸುವ ಎಲ್ಲಾ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರು ಒಳಪಡುತ್ತಾರೆ. ಸರ್ಕಾರವು ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಉದ್ದಿಮೆಗಳಲ್ಲಿ 1000 ಕ್ಕಿಂತ ಹೆಚ್ಚು ಕಾರ್ಮಿಕರು ಕೆಲಸ ನಿರ್ವಹಿಸುತ್ತಿರುವ ಉದ್ದಿಮೆಗಳನ್ನು ಆಗಿಂದಾಗ್ಗೆ ಗುರುತಿಸಿ ಕನಿಷ್ಠ ವೇತನ ಕಾಯ್ದೆಯ ಅನುಸೂಚಿಗೆ ಸೇರ್ಪಡೆಗೊಳಿಸುತ್ತಿದೆ. ಆದುದರಿಂದ, ಹೆಚ್ಚಿನ ಸಂಖ್ಯೆಯ ಕಾರ್ಮಿಕರನ್ನು ಕನಿಷ್ಠ ವೇತನ ಕಾಯ್ದೆಯ ವ್ಯಾಪ್ತಿಗೆ ತರುವ ಪ್ರಕ್ರಿಯೆ ನಿರಂತರವಾಗಿರುತ್ತದೆ. |

| | | |
|---|---|---|
| ಉ) | ಸರ್ಕಾರದ ಇಲಾಖೆಗಳಲ್ಲಿ ಪರ್ಯಾಯ ಹೆಸರಿನಿಂದ ಅಂದರೆ ಅಂಗನವಾಡಿ/ ಆಶಾ ಕಾರ್ಯಕರ್ತೆಯರು ಸಹಾಯಕರು, ಬಿಸಿಯೂಟ ಸಿಬ್ಬಂದಿಗಳು, ಅತಿಥಿ ಶಿಕ್ಷಕರು/ ಉಪನ್ಯಾಸಕರು, ಹೊರಗುತ್ತಿಗೆ ಸಿಬ್ಬಂದಿಗಳು, ಗೌರವಧನ ಆಧಾರಿತ ಸೇವೆಗಳ ಹೆಸರಿನಲ್ಲಿ ಕಡಿಮೆ ವೇತನ ನಿಗದಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆಲವು ಸಂದರ್ಭದಲ್ಲಿ ಕುಶಲ ಕಾರ್ಮಿಕರಿಗೆ/ ಸಿಬ್ಬಂದಿಗಳಿಗೆ ಅಕುಶಲ ಕನಿಷ್ಟ ವೇತನಕ್ಕಿಂತ ಕಡಿಮೆ ವೇತನ ನಿಗದಿಪಡಿಸಿರುವುದರ ಕುರಿತು ಸರ್ಕಾರ ವಹಿಸಿದ ಕ್ರಮಗಳೇನು; (ವಿವರ ನೀಡುವುದು) | ಹೌದು.<br>• ಅಂಗನವಾಡಿ / ಆಶಾ ಕಾರ್ಯಕರ್ತೆಯರು ಸಹಾಯಕರು, ಬಿಸಿಯೂಟ ಸಿಬ್ಬಂದಿಗಳು, ಸರ್ಕಾರದ ವಿವಿಧ ಯೋಜನೆಗಳಡಿ ಗೌರವಧನದ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಅನುಸೂಚಿತ ಉದ್ದಿಮೆಯ ವ್ಯಾಪ್ತಿಗೆ ಒಳಪಡದ ಕಾರಣ ಪ್ರಸ್ತುತ ಸದರಿ ನೌಕರರಿಗೆ ಕನಿಷ್ಠ ವೇತನ ದರಗಳು ಅನ್ವಯಿಸುವುದಿಲ್ಲ. ಈ ನೌಕರರಿಗೆ ವೇತನ ಪಾವತಿಸುವುದು ಆಯಾ ಇಲಾಖೆಯ ಜವಾಬ್ದಾರಿಯಾಗಿರುತ್ತದೆ.<br>• ಅತಿಥಿ ಶಿಕ್ಷಕರು / ಉಪನ್ಯಾಸಕರು ಕನಿಷ್ಠ ವೇತನ ಕಾಯ್ದೆಯ ಕಲಂ 2(i) ರಡಿ "ಕಾರ್ಮಿಕ" ಪದದ ವ್ಯಾಖ್ಯಾನಕ್ಕೆ ಒಳಪಡುವುದಿಲ್ಲ.<br>• ಕಾರ್ಮಿಕರ ಕೆಲಸದ ಸ್ವರೂಪ ಹಾಗೂ ಕೌಶಲ್ಯದ ಆಧಾರದ ಮೇಲೆ ಕನಿಷ್ಠ ವೇತನ ದರಗಳನ್ನು ನಿಗದಿ / ಪರಿಷ್ಕರಣೆ ಮಾಡಲಾಗುತ್ತಿದೆ. "ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ ಕೆಲಸಗಳಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರು ನಿರ್ವಹಿಸುತ್ತಿರುವ ಕೆಲಸದ ಸ್ವರೂಪ ಹಾಗೂ ಅದರಿಂದ ಆರೋಗ್ಯದಲ್ಲಿ ಉಂಟಾಗಬಹುದಾದ ಪರಿಣಾಮಗಳನ್ನು ಮನಗಂಡು ಸರ್ಕಾರವು ಇತರೆ ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ಮಾಡುತ್ತಿರುವ ಕುಶಲ ವರ್ಗದ ನೌಕರರಿಗಿಂತ ಹೆಚ್ಚಿನ ವೇತನವನ್ನು ನಿಗದಿಪಡಿಸಲಾಗಿದೆ. ಇದನ್ನು ಹೊರತುಪಡಿಸಿ, ಬೇರೆ ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ನಿರ್ವಹಿಸುವ ಅಕುಶಲ ಕಾರ್ಮಿಕರಿಗೆ ಕುಶಲ ಕಾರ್ಮಿಕರಿಗಿಂತ ಹೆಚ್ಚಿನ ವೇತನ ನಿಗದಿಪಡಿಸಿರುವುದಿಲ್ಲ. |
| ಊ) | ಸರ್ಕಾರದ ಇಲಾಖೆಗಳಲ್ಲಿ ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನ/ ಗೌರವಧನವನ್ನು ಕ್ರಿಯಾ ಯೋಜನೆ ಲೆಕ್ಕಶೀರ್ಷಿಕೆಯಲ್ಲಿ ಮೀಸಲಿಟ್ಟು ಅನುದಾನ ಬಿಡುಗಡೆ / ಕ್ರಿಯಾ ಯೋಜನೆ ಅನುಮೋದನೆ ಇತ್ಯಾದಿಗಳಿಂದಾಗಿ ವೇತನ ಪಾವತಿ ತಡವಾಗುತ್ತಿರುವ ಬಗ್ಗೆ ಸರ್ಕಾರದ ಪರಿಹಾರ ಕ್ರಮಗಳೇನು? (ವಿವರ ನೀಡುವುದು) | ಸರ್ಕಾರದ ಇಲಾಖೆಗಳಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ಸಿಬ್ಬಂದಿಗಳಿಗೆ ಸರ್ಕಾರದ ದಿನಾಂಕ: 01-09-2022 ರ ಸುತ್ತೋಲೆಯ (ಪ್ರತಿಯನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ) ಮಾರ್ಗಸೂಚಿಗಳನ್ವಯ, "ನಗರ ಸ್ಥಳೀಯ ಸಂಸ್ಥೆಗಳು ಮತ್ತು ಪಂಚಾಯತ್ ರಾಜ್ ಸಂಸ್ಥೆಗಳು" ಅನುಸೂಚಿತ ಉದ್ದಿಮೆಯ ದರಗಳನ್ನು ಪಾವತಿಸಬೇಕಿರುತ್ತದೆ. ವೇತನ ಪಾವತಿ ತಡವಾಗುತ್ತಿರುವ ಬಗ್ಗೆ ದೂರು ಸ್ವೀಕೃತವಾದಲ್ಲಿ ವೇತನ ಪಾವತಿ ಕಾಯ್ದೆಯಡಿ ಕಾರ್ಯವ್ಯಾಪ್ತಿಯ ಉಪ ಕಾರ್ಮಿಕ ಆಯುಕ್ತರು / ಸಹಾಯಕ ಕಾರ್ಮಿಕ ಆಯುಕ್ತರ ಮುಂದೆ ಕ್ಲೈಮ್ ಅರ್ಜಿ ದಾಖಲಿಸಿ ಪರಿಹಾರ ಪಡೆಯಬಹುದಾಗಿರುತ್ತದೆ. ಸರ್ಕಾರಿ ಇಲಾಖೆಯಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ನೌಕರರ ದೂರುಗಳನ್ನು ಒಳಗೊಂಡಂತೆ, 2023-24 ನೇ ಸಾಲಿನಲ್ಲಿ 2637 ನೌಕರರಿಗೆ ಸಂಬಂಧಿಸಿದಂತೆ, 468 ಕ್ಲೈಮ್ ಅರ್ಜಿಗಳು ದಾಖಲಾಗಿದ್ದು, ಸದರಿ ಪ್ರಕರಣಗಳಲ್ಲಿ ರೂ. 48,51,91,998-00 ಗಳ ಆದೇಶ ಹೊರಡಿಸಲಾಗಿರುತ್ತದೆ. |

ಸಂಖ್ಯೆ: ಕಾಇ 339 ಎಲ್ ಡಬ್ಲ್ಯೂಎ 2024

(ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಮಂಜುನಾಥ ಭಂಡಾರಿ [ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು] ಇವರ ಚು. ಗು. ಇಲ್ಲದ ಪ್ರ. ಸಂ. 515 ಕ್ಕೆ ಅನುಬಂಧ - 1

# ಕಾಯ್ದೆ ಮತ್ತು ನಿಯಮಗಳು

| ಕ್ರಮ ಸಂಖ್ಯೆ | ಕಾಯಿದೆಗಳು / ನಿಯಮಗಳ ಹೆಸರು |
|---|---|
| | <u>ಕೈಗಾರಿಕಾ ಸಂಬಂಧಗಳ ಕಾರ್ಮಿಕ ಕಾನೂನುಗಳು</u> |
| 1. | ಕೈಗಾರಿಕಾ ವಿವಾದ ಕಾಯ್ದೆ .1947 |
| 2. | ಕೈಗಾರಿಕಾ ಉದ್ಯೋಗ ಕಾಯ್ದೆ .1946 |
| 3. | ಟ್ರೇಡ್ ಯೂನಿಯನ್ಸ್ ಆಕ್ಟ್. .1926<br>a. ಕರ್ನಾಟಕ ಕಾರ್ಮಿಕ ಸಂಘಗಳ ನಿಯಮಗಳು.1958 |
| | ಸಾಮಾಜಿಕಭದ್ರತೆಯಕುರಿತುಕಾರ್ಮಿಕಕಾನೂನುಗಳು |
| 4. | ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವೆಯ ಷರತ್ತುಗಳು) ಕಾಯ್ದೆ. 1996 |
| 5. | ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಸೆಸ್ ಕಾಯ್ದೆ,1996 |
| 6. | ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ. 1965<br>a. ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ನಿಯಮಗಳು 1968 |
| 7. | ಹೆರಿಗೆ ಪ್ರಯೋಜನ ಕಾಯ್ದೆ. 1961 |
| 8. | ಗ್ರಾಚ್ಯುಟಿ ಕಾಯಿದೆಯ ಪಾವತಿ. 1972<br>a. ಗ್ರಾಚ್ಯುಟಿ (ಕರ್ನಾಟಕ) ನಿಯಮಗಳ ಪಾವತಿ 1973 |
| 9. | ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008 |
| | <u>ವೇತನದಮೇಲೆಕಾರ್ಮಿಕಕಾನೂನುಗಳು</u> |
| 10. | ಸಮಾನ ಸಂಭಾವನೆ ಕಾಯಿದೆ. 1976<br>a. ಸಮಾನ ಸಂಭಾವನೆ ನಿಯಮಗಳು 1976 |
| 11. | ಕರ್ನಾಟಕ ಜೀವನಾಧಾರ ಭತ್ಯೆ ಕಾಯ್ದೆ, 1988<br>a. ಕರ್ನಾಟಕ ಪಾವತಿ ಜೀವನಾಧಾರ ಭತ್ಯೆ ನಿಯಮಗಳು 2004 |
| 12. | ಕನಿಷ್ಠ ವೇತನ ಕಾಯ್ದೆ 1948 |
| 13. | ಕನಿಷ್ಠ ವೇತನ (ಕರ್ನಾಟಕ) ನಿಯಮಗಳು. 1958 |
| 14. | ಬೋನಸ್ ಕಾಯಿದೆಯ ಪಾವತಿ, 1965 |
| 15. | ವೇತನ ಪಾವತಿ ಕಾಯ್ದೆ. 1936 |
| 16. | ಕೆಲಸದಪರಿಸ್ಥಿತಿಗಳಲ್ಲಿಕಾರ್ಮಿಕಕಾನೂನುಗಳು |

ಬೀಡಿ & amp; ಸಿಗಾರ್ ಕಾರ್ಮಿಕರು (ಉದ್ಯೋಗದ ಷರತ್ತುಗಳು) ಕಾಯ್ದೆ. 1966

a. ಬೀಡಿ ಮತ್ತು ಸಿಗಾರ್ ಕಾರ್ಮಿಕರು (ಉದ್ಯೋಗದ ಪರಿಸ್ಥಿತಿಗಳು) ನಿಯಮಗಳು -1969

17. ಬಾಲ ಕಾರ್ಮಿಕ ಪದ್ಧತಿ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ. 1986

a. ಮಕ್ಕಳ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) (ಕರ್ನಾಟಕ) ನಿಯಮಗಳು. 1997

18. ಗುತ್ತಿಗೆ ಕಾರ್ಮಿಕ (ನಿಯಂತ್ರಣ ಮತ್ತು ನಿರ್ಮೂಲನೆ) ಕಾಯ್ದೆ, 1970

ಅಂತರ-ರಾಜ್ಯ ವಲಸೆ ಕಾರ್ಮಿಕರು (ಉದ್ಯೋಗ ನಿಯಂತ್ರಣ ಮತ್ತು ಸೇವೆಯ ಷರತ್ತುಗಳು) ಕಾಯ್ದೆ. 1979

19. a. ಅಂತರ ರಾಜ್ಯ ವಲಸೆ ಕಾರ್ಮಿಕರು (ಉದ್ಯೋಗ ನಿಯಂತ್ರಣ ಮತ್ತು ಸೇವೆಯ ಸ್ಥಿತಿ), ಕರ್ನಾಟಕ ನಿಯಮಗಳು. 1981

b. ಅಂತರ ರಾಜ್ಯ ವಲಸೆ ಕಾರ್ಮಿಕರು (ಉದ್ಯೋಗ ನಿಯಂತ್ರಣ ಮತ್ತು ಸೇವೆಯ ಸ್ಥಿತಿ) ಕರ್ನಾಟಕ ನಿಯಮಗಳು. 1981

20. ಕರ್ನಾಟಕ ಕೈಗಾರಿಕಾ ಸ್ಥಾಪನೆಗಳು (ರಾಷ್ಟ್ರೀಯ & amp; ಹಬ್ಬದ ರಜಾದಿನಗಳು) ಕಾಯ್ದೆ. 1963

a. ಕರ್ನಾಟಕ ಕೈಗಾರಿಕಾ ಸಂಸ್ಥೆಗಳು (ರಾಷ್ಟ್ರೀಯ ಮತ್ತು ಹಬ್ಬದ ರಜಾದಿನಗಳು) ನಿಯಮಗಳು 1964

21. ಕರ್ನಾಟಕ ಅಂಗಡಿಗಳು & amp; ವಾಣಿಜ್ಯ ಸ್ಥಾಪನೆ ಕಾಯ್ದೆ, 1961

a. ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1963

b. ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ ನಿಯಮಗಳು 1963

22. ಮೋಟಾರ್ ಸಾರಿಗೆ ಕಾರ್ಮಿಕರ ಕಾಯ್ದೆ, 1961

a. ಮೋಟಾರು ಸಾರಿಗೆ ಕಾರ್ಮಿಕರ (ಕರ್ನಾಟಕ) ನಿಯಮಗಳು 1964

23. ತೋಟಗಳ ಕಾರ್ಮಿಕ ಕಾಯಿದೆ. 1951

a.ತೋಟಗಳ ಕಾರ್ಮಿಕ (ಕರ್ನಾಟಕ) ನಿಯಮಗಳು 1956

24. ಮಾರಾಟ ಪ್ರಚಾರ ನೌಕರರ (ಸೇವೆಗಳ ಸ್ಥಿತಿ) ಕಾಯ್ದೆ. 1976

25. ಕೆಲಸ ಮಾಡುವ ಪತ್ರಕರ್ತರು & amp; ಇತರ ಸುದ್ದಿ ಕಾಗದ ನೌಕರರು (ಸೇವೆಗಳ ಸ್ಥಿತಿ) & amp; ವಿವಿಧ ನಿಬಂಧನೆಗಳ ಕಾಯ್ದೆ, 1955

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅನುಬಂಧ - 2.
ಮಂಜುನಾಥ ಭಂಡಾರಿ [ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು] ಇವರ
ಚು. ಗು. ಇಲ್ಲದ ಪ್ರ. ಸಂಖ್ಯೆ: 515 ಕ್ಕೆ ಅನುಬಂಧ - 2.

**ಕರ್ನಾಟಕ ಸರ್ಕಾರ**

**ಸಂಖ್ಯೆ: ಕಾಇ 105 ಎಲ್‌ಡಬ್ಲ್ಯೂಎ 2022**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ವಿಕಾಸಸೌಧ,**
**ಬೆಂಗಳೂರು, ದಿನಾಂಕ: 01.09.2022**

**ಸುತ್ತೋಲೆ**

**ವಿಷಯ:** ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ಸಿಬ್ಬಂದಿಗಳಿಗೆ ಕನಿಷ್ಠ ವೇತನ ನೀಡುವ ಬಗ್ಗೆ.

**ಉಲ್ಲೇಖ:** ಕಾರ್ಮಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಇ 51 ಎಲ್ ಡಬ್ಲ್ಯೂ ಎ 2017, ದಿನಾಂಕ: 29.12.2017.

*********

ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರಿ ಸ್ವಾಮ್ಯದ ನಿಗಮಗಳು, ಮಂಡಳಿಗಳು, ವಿಶ್ವವಿದ್ಯಾಲಯಗಳು, ಮಹಾವಿದ್ಯಾಲಯಗಳು, ಶಾಲೆಗಳು, ಸ್ಥಳೀಯ ಸಂಸ್ಥೆಗಳು, ಶಾಸನಬದ್ಧ ಸಂಸ್ಥೆಗಳು, ಸೊಸೈಟಿಗಳು, ಪರಿಷತ್ತುಗಳು, ಯಾವುದೇ ರೀತಿಯ ರಾಜ್ಯ ಸರ್ಕಾರದ ಅಧೀನ / ಸ್ವಾಯತ್ತ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪಾವತಿಸಬೇಕಾದ ಕನಿಷ್ಠ ವೇತನ, ದುಡಿಮೆಯ ಗಂಟೆಗಳು, ರಜಾ ದಿನಗಳು, ಇ.ಎಸ್.ಐ/ ಪಿ.ಎಫ್ ಕಟಾವಣೆ ಬಗ್ಗೆ ಹಾಗೂ ಮಾನವ ಸಂಪನ್ಮೂಲ ಪೂರೈಸುವ ಗುತ್ತಿಗೆದಾರರು ನಿರ್ವಹಿಸುವ ಅಂಶಗಳ ಬಗ್ಗೆ ಸೂಕ್ತ ಮಾರ್ಗದರ್ಶನವನ್ನು ಉಲ್ಲೇಖಿತ ಸುತ್ತೋಲೆಯಲ್ಲಿ ನೀಡಲಾಗಿತ್ತು. ಸದರಿ ಸುತ್ತೋಲೆಯ ಕ್ರ.ಸಂ. 1, 2 ಹಾಗೂ 3 ರಲ್ಲಿ ಕ್ರಮವಾಗಿ "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)", "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ", ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (**Scavenging**) ಕೆಲಸಗಳಲ್ಲಿ ಉದ್ಯೋಗ (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ)" ಅನುಸೂಚಿತ ಉದ್ದಿಮೆಗಳಿಗೆ ಸಂಬಂಧಿಸಿದಂತೆ 2016ನೇ ಸಾಲಿನಲ್ಲಿ ಹೊರಡಿಸಲಾಗಿದ್ದ ಅಧಿಸೂಚನೆಗಳಲ್ಲಿನ ದರಗಳನ್ನು ಅನ್ವಯಿಸಿಕೊಂಡು ಕನಿಷ್ಠ ವೇತನ ಪಾವತಿಸುವಂತೆ ತಿಳಿಸಲಾಗಿರುತ್ತದೆ.

ಸದರಿ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ ಅಧಿಸೂಚನೆಗಳನ್ನು ಹೊರಡಿಸಿರುವ ಹಿನ್ನೆಲೆಯಲ್ಲಿ, ಪ್ರಸ್ತುತ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಈ ಕೆಳಕಂಡಂತೆ ಕನಿಷ್ಠ ವೇತನ ದರಗಳನ್ನು ಅನ್ವಯಿಸಿಕೊಳ್ಳಲು ಸುತ್ತೋಲೆಯನ್ನು ಹೊರಡಿಸಲಾಗಿದೆ.

1. ಹೊರಗುತ್ತಿಗೆ ಸಿಬ್ಬಂದಿಗಳನ್ನು ಭದ್ರತಾ ಏಜೆನ್ಸಿ ಮುಖಾಂತರ ನೇಮಿಸಿಕೊಂಡಿದ್ದಲ್ಲಿ, "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ

ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)", ಅನುಸೂಚಿತ ಉದ್ದಿಮೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 18 ಎಲ್‌ಡಬ್ಲ್ಯೂಎ 2022, ದಿನಾಂಕ: 28.07.2022ರಲ್ಲಿ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.

2. ಇತರೆ ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇಮಿಸಿಕೊಂಡಲ್ಲಿ, "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಅನುಸೂಚಿತ ಉದ್ದಿಮೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 106 ಎಲ್‌ಡಬ್ಲ್ಯೂಎ 2021, ದಿನಾಂಕ: 28.07.2022ರಲ್ಲಿ ನಿಗದಿಪಡಿಸಿರುವ ಕನಿಷ್ಠ ದರಗಳನ್ನು ಪಾವತಿಸತಕ್ಕದ್ದು.
3. ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (Scavenging) ಕೆಲಸಗಳಲ್ಲಿ ಉದ್ಯೋಗ (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ)" ಅನುಸೂಚಿತ ಉದ್ದಿಮೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 105 ಎಲ್ ಡಬ್ಲ್ಯೂಎ 2021 ದಿನಾಂಕ: 28.07.2022ರಲ್ಲಿ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
4. ಕಾರ್ಮಿಕರ ಕೆಲಸದ ಸ್ವರೂಪದ ಬಗ್ಗೆ ಸ್ಪಷ್ಟತೆ ಇರದಿದ್ದಲ್ಲಿ, ಈ ಬಗ್ಗೆ ಸ್ಪಷ್ಟವಾಗಿ ನಿರ್ಣಯಕ್ಕೆ ಬರಲು ಆಯಾ ಇಲಾಖೆಗಳ ಹಂತದಲ್ಲಿ ಅಧಿಸೂಚನೆಯಲ್ಲಿ ನಮೂದಾಗಿರುವ ಕೆಲಸದ ಸ್ವರೂಪಗಳಿಗೆ ಸಮಾನವಾಗಿವೆಯೇ ಎಂಬುದನ್ನು ಅಧ್ಯಯನ ಮಾಡಿ, ನಿರ್ಣಯಕ್ಕೆ ಬಂದು ಆಯಾ ಸ್ವರೂಪದ ಕೆಲಸಗಳಿಗೆ ವೇತನ ಅನ್ವಯಿಸಿಕೊಳ್ಳಬಹುದಾಗಿರುತ್ತದೆ.
5. ಪ್ರತಿ ವರ್ಷ ಏಪ್ರಿಲ್ ಮಾಹೆಯಲ್ಲಿ ಏರಿಕೆಯಾಗುವ ವ್ಯತ್ಯಸ್ಥ ತುಟ್ಟಿಭತ್ಯೆ ದರಗಳನ್ನು ಸೇರಿಸಿ ಪಾವತಿಸತಕ್ಕದ್ದು.
6. ವಿರಾಮವು ಒಳಗೊಂಡಂತೆ ಒಂದು ದಿನಕ್ಕೆ ಎಂಟು ಘಂಟೆಗಳ ಕೆಲಸಕ್ಕಾಗಿ ಕನಿಷ್ಠ ವೇತನವಿದ್ದು, ಎಂಟು ತಾಸಿಗಿಂತಲೂ ಹೆಚ್ಚಿನ ಕೆಲಸಕ್ಕಾಗಿ ಹೆಚ್ಚುವರಿ ಭತ್ಯೆಯನ್ನು ಘಂಟೆಯು ಹೆಚ್ಚಾದಂತೆ ದ್ವಿಗುಣ ದರದಲ್ಲಿ ನೀಡುವುದು. ವೇತನವನ್ನು ಲೆಕ್ಕ ಹಾಕುವಾಗ, ಮಾಹೆಯ 4 ರಜಾದಿನಗಳನ್ನೂ ಕೂಡ ಪರಿಗಣಿಸತಕ್ಕದ್ದು.

   $\frac{\text{ತಿಂಗಳ ವೇತನ}}{\text{26 ದಿನಗಳು}} = \frac{\text{ದಿನದ ವೇತನ}}{\text{8 ತಾಸು}} = \text{ಘಂಟೆಯ ವೇತನ}$

7. ಒಂದು ದಿನದ ಕೆಲಸ ಎಂದರೆ ಎಂಟು (8) ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು ಎಂಟು (8) ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಥವಾ ಕಾರ್ಮಿಕರು ಕೆಲಸ ನಿರ್ವಹಿಸಿದ್ದಲ್ಲಿ, ಅಂತಹ ಕಡಿಮೆ ಅವಧಿಯ ಪ್ರಮಾಣಕ್ಕನುಗುಣವಾಗಿ ಕನಿಷ್ಠ ವೇತನವನ್ನು ಕರ್ನಾಟಕ ಕನಿಷ್ಠ ವೇತನ ನಿಯಮಗಳು, 1958ರ ನಿಯಮ 27 ರನ್ವಯ ಆ ಕೆಲಸದ ವರ್ಗಕ್ಕೆ ನಿಗದಿಪಡಿಸಿರುವ ದಿನವೊಂದರ ಕನಿಷ್ಠ ವೇತನವನ್ನು ಗಂಟೆಗಳ ಕನಿಷ್ಠ ವೇತನವನ್ನಾಗಿ ಲೆಕ್ಕ ಹಾಕಿ, ಸಂಬಂಧಿಸಿದ ಕಾರ್ಮಿಕರಿಗೆ ಉದ್ಯೋಗದಾತರು ಪಾವತಿಸತಕ್ಕದ್ದು.
8. ಒಂದು ತಿಂಗಳಿನ ನಾಲ್ಕು ರಜಾ ದಿವಸಗಳಲ್ಲಿ ಕಾರ್ಮಿಕನು ಕೆಲಸ ಮಾಡಲು ಇಚ್ಛಿಸಿದಲ್ಲಿ ದ್ವಿಗುಣ ದಿನಭತ್ಯೆ ದರವನ್ನು ಹೆಚ್ಚಿನ ಭತ್ಯೆಯನ್ನಾಗಿ ಪ್ರತಿ ದಿನಕ್ಕೆ ಅವನು/ಅವಳು ಪಡೆಯುತ್ತಾರೆ.
9. ಮಾಲೀಕರ ಭಾಗದ ಇ.ಎಸ್.ಐ./ಪಿ.ಎಫ್. ವಂತಿಗೆ ಹಣವನ್ನು ನೌಕರರ ಭಾಗದ ಇ.ಎಸ್.ಐ/ ಪಿ.ಎಫ್ ವಂತಿಗೆಗೆ ಸೇರಿಸಿ, ಮಾಲೀಕರು ನೌಕರರ ಇ.ಎಸ್.ಐ / ಪಿ.ಎಫ್ ಖಾತೆಗೆ ಜಮಾ ಮಾಡತಕ್ಕದ್ದು.

. . 3

10. ಮಾನವ ಸಂಪನ್ಮೂಲ ಪೂರೈಸುವ ಗುತ್ತಿಗೆದಾರ ಸಂಸ್ಥೆಗಳ ಮೇಲೆ ಮೂಲ ಗುತ್ತಿಗೆದಾರರು ಈ ಕೆಳಕಂಡ ಅಂಶಗಳ ಬಗ್ಗೆ ನಿಗಾ ವಹಿಸತಕ್ಕದ್ದು.:-

ಅ) ಮೇಲಿನ ನಿಯಮಗಳಂತೆ, ವೇತನವನ್ನು ಪಾವತಿಸತಕ್ಕದ್ದು.

ಆ) ಪ್ರತಿ ತಿಂಗಳು 5ನೇ ದಿನಾಂಕದೊಳಗೆ ನೌಕರರ ಬ್ಯಾಂಕ್ ಖಾತೆಗೆ ವೇತನದ ಹಣವನ್ನು ಜಮಾ ಮಾಡತಕ್ಕದ್ದು.

ಇ) ಕ್ರಮಬದ್ಧವಲ್ಲದ ಯಾವುದೇ ಕಟಾವಣೆಗಳನ್ನು ಮಾಡಕೂಡದು.

ಈ) ನೌಕರರ ಇ.ಎಸ್.ಐ /ಪಿ.ಎಫ್ ನೊಂದಾಯಿಸಿದ ನೋಂದಾವಣೆ ಸಂಖ್ಯೆಗಳಿಗೆ ಅನುಗುಣವಾಗಿ ಇ.ಎಸ್ಐ / ಪಿ.ಎಫ್ ವಂತಿಗೆ ಹಣವನ್ನು ಗುತ್ತಿಗೆದಾರ ಕಟಾಯಿಸಿ, ನಿರ್ವಹಿಸಿರುವ ದಾಖಲೆ ಪ್ರಸ್ತುತ ಅವಧಿಗಳಿಗೆ ಸಂಬಂಧಿಸಿರುವುದೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು.

11. ನೌಕರರ ಹಾಜರಾತಿಯನ್ನು ಆಧಾರ ಸಂಖ್ಯೆಗೆ ಜೋಡಣೆಯಾಗಿರುವ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ (AEBAS)ಯ ಮುಖಾಂತರ ನಿರ್ವಹಿಸತಕ್ಕದ್ದು ಹಾಗೂ (AEBAS) ವ್ಯವಸ್ಥೆಯ ಮೂಲಕ ಹಾಜರಾತಿಯನ್ನು ನಿರ್ವಹಿಸಲಾಗದ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುವ ನೌಕರರ ಹಾಜರಾತಿಯನ್ನು ಸೂಕ್ತ ವ್ಯವಸ್ಥೆಯ ಮೂಲಕ ನಿರ್ವಹಿಸತಕ್ಕದ್ದು.

12. ಕನಿಷ್ಠ ವೇತನ ದರಗಳು ಶಾಸನಬದ್ಧ ಪರಿಮಿತಿಯಾಗಿರುವುದರಿಂದ, ಕನಿಷ್ಠ ವೇತನ ದರಗಳನ್ನು ನಮೂದಿಸದೆ ಟೆಂಡರ್ ದಾಖಲೆಯಲ್ಲಿ ಕೇವಲ "ಸೇವಾ ಶುಲ್ಕವನ್ನು" ಮಾತ್ರ ನಮೂದಿಸುವ ಅವಕಾಶವನ್ನು ಮಾನವ ಸಂಪನ್ಮೂಲ ಪೂರೈಕೆ ಸಂಸ್ಥೆಗಳಿಗೆ ಕಲ್ಪಿಸುವ ಷರತ್ತಿನೊಂದಿಗೆ ಟೆಂಡರ್‌ನ್ನು ಪ್ರಕಟಿಸತಕ್ಕದ್ದು.

ಟೆಂಡರ್‌ನಲ್ಲಿ ಭಾಗವಹಿಸುವ ಎಲ್ಲಾ ಮಾನವ ಸಂಪನ್ಮೂಲ ಪೂರೈಕೆ ಸಂಸ್ಥೆಗಳ ಪೂರ್ವಾಪರಗಳನ್ನು ಪರಿಶೀಲಿಸಿ,

(ಅ) ಸದರಿ ಸಂಸ್ಥೆಗಳು ಈ ಹಿಂದೆ ನೌಕರರ ಇ.ಎಸ್.ಐ ಮತ್ತು ಪಿ.ಎಫ್ ವಂತಿಗೆಯನ್ನು ಸರಿಯಾಗಿ ಪಾವತಿಸಿರುವ ಕುರಿತು ಹಿಂದಿನ ಕೆಲವು ವರ್ಷಗಳ ದಾಖಲೆಗಳನ್ನು ಪರಿಶೀಲಿಸಬೇಕು.

(ಆ) ಇತರೆ ಅನ್ವಯವಾಗುವ ಕಾರ್ಮಿಕ ಕಾನೂನುಗಳನ್ನು ಪಾಲಿಸಿವೆಯೇ ಎಂಬುದನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು.

(ಇ) ಸದರಿ ಗುತ್ತಿಗೆದಾರರು ಈ ಹಿಂದೆ ಯಾವುದೇ ಸಕ್ಷಮ ನ್ಯಾಯಾಲಯದಿಂದ ಕಾರ್ಮಿಕ ಕಾನೂನಿನ ಉಲ್ಲಂಘನೆಗಾಗಿ ದಂಡನೆಗೊಳಗಾಗಿಲ್ಲದಿರುವ ಬಗ್ಗೆ ಖಚಿತ ಪಡಿಸಿಕೊಳ್ಳಬೇಕು.

ಟೆಂಡರ್ ದಾಖಲೆಗಳಲ್ಲಿ ಮೇಲ್ಕಂಡ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಅಳವಡಿಸಿಕೊಂಡು ಟೆಂಡರ್ ದಾಖಲೆಯನ್ನು ಪ್ರಕಟಿಸತಕ್ಕದ್ದು.

ಆದಾಗ್ಯೂ ಸಹ ಅನೇಕ ಸರ್ಕಾರಿ ಇಲಾಖೆಗಳು, ಸಂಘ-ಸಂಸ್ಥೆಗಳು, ಸರ್ಕಾರಿ ಸ್ವಾಮ್ಯದ ಅಂಗ-ಸಂಸ್ಥೆಗಳು ಈ ಸುತ್ತೋಲೆಯಲ್ಲಿನ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸದೇ ಇರುವುದು, ನಿಗದಿಪಡಿಸಿರುವ ಕನಿಷ್ಠ ವೇತನಗಳನ್ನು ಪ್ರತಿ ತಿಂಗಳು ಪಾವತಿಸುತ್ತಿಲ್ಲದೆ ಇರುವುದು ಹಾಗೂ ನೌಕರರ ವೇತನದಿಂದ ಕಟಾಯಿಸಿದ

. . 4

ಪಿ.ಎಫ್, ಇ.ಎಸ್.ಐ ವಂತಿಗೆಗೆ ಮಾಲೀಕರ ಭಾಗದ ವಂತಿಗೆಯನ್ನು ಸೇರಿಸಿ ಇ.ಎಸ್.ಐ. ಪಿ.ಎಫ್ ಖಾತೆಗೆ ಜಮಾ ಮಾಡುತ್ತಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಲ್ಲಿ, ಸರ್ಕಾರವು ಇಂತಹ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸುವುದೆಂದು ಈ ಮೂಲಕ ತಿಳಿಸಲಾಗಿದೆ.

(ಸಂಧ್ಯಾ ಎಲ್. ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಈ ಸುತ್ತೋಲೆಯನ್ನು ಇ-ರಾಜ್ಯಪತ್ರ (E-Gazette)ದಲ್ಲಿ ಪ್ರಕಟಿಸಲು ಕೋರಲಾಗಿದೆ.

1. ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು.
2. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
4. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, (ಕಾರ್ಮಿಕ ಆಯುಕ್ತರ ಮೂಲಕ)
5. ಎಲ್ಲಾ ಜಿಲ್ಲೆಗಳ ವಿಭಾಗಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)

ಪ್ರತಿಗಳು:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ /ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ವಿಕಾಸಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

| | | | |
|---|---|---|---|
| 2 | ಅಳ್ನಾವರ | ಉಪವಿಭಾಗಾಧಿಕಾರಿಗಳು, ಧಾರವಾಡ | ಉಪವಿಭಾಗಾಧಿಕಾರಿಗಳು, ಧಾರವಾಡ |
| 3 | ಹುಬ್ಬಳ್ಳಿ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ |
| 4 | ಹುಬ್ಬಳ್ಳಿ ನಗರ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ |
| 5 | ಕಲಘಟಗಿ | ಉಪ ಆಯುಕ್ತರು (ಆಡಳಿತ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಹುಬ್ಬಳ್ಳಿ | ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಧಾರವಾಡ |
| 6 | ನವಲಗುಂದ | ಉಪ ಆಯುಕ್ತರು (ಆಡಳಿತ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಹುಬ್ಬಳ್ಳಿ | ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಷ್ಟ್ರೀಯ ಹೆದ್ದಾರಿ-4, ಮಿನಿ ವಿಧಾನ ಸೌಧ ಧಾರವಾಡ |
| 7 | ಅಣ್ಣಿಗೇರಿ | ಉಪ ಆಯುಕ್ತರು (ಆಡಳಿತ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಹುಬ್ಬಳ್ಳಿ | ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಷ್ಟ್ರೀಯ ಹೆದ್ದಾರಿ-4, ಮಿನಿ ವಿಧಾನ ಸೌಧ ಧಾರವಾಡ |
| 8 | ಕುಂದಗೋಳ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ | ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಧಾರವಾಡ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಗದೀಶ. ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಸುಧಾರಣೆ)

PR-749

## ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 18 ಎಲ್‌ಡಬ್ಲ್ಯೂಎ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 28-07-2022

### ಅಧಿಸೂಚನೆ

ಕರ್ನಾಟಕ ರಾಜ್ಯದಾದ್ಯಂತ "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)" ಅನುಸೂಚಿತ ಉದ್ದಿಮೆಯಲ್ಲಿ ಯಾವುದೇ ಕೆಲಸದಲ್ಲಿ ತೊಡಗಿರುವ ಕಾರ್ಮಿಕರಿಗೆ **ಈ ಕೆಳಕಂಡ "ಕನಿಷ್ಠ ವೇತನ ಕೋಷ್ಟಕ"**ದಲ್ಲಿ ನಿರ್ದಿಷ್ಟಪಡಿಸಿರುವಂತೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಲು ರಾಜ್ಯ ಸರ್ಕಾರದ ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಪತ್ರದ ಭಾಗ - 4ಎರಲ್ಲಿ 19.03.2022ರಂದು ಪ್ರಕಟಿಸಿ, 1948ರ ಕನಿಷ್ಠ ವೇತನ ಕಾಯ್ದೆಯ (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3(1) (ಬಿ) ಮತ್ತು 5 (1) (ಬಿ) ಖಂಡದ ಮೇರೆಗೆ ಬಾಧಿತರಾಗುವ/ ಸಂಬಂಧವಿರುವ ವ್ಯಕ್ತಿಗಳ ಗಮನಕ್ಕೆ ತರಲಾಗಿದ್ದು, ಅವರಿಂದ ಸಲಹೆ/ ಆಕ್ಷೇಪಣೆಗಳನ್ನು ಸ್ವೀಕರಿಸಲು ಎರಡು ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಸ್ವೀಕೃತಗೊಂಡ ಸಲಹೆ/ ಆಕ್ಷೇಪಣೆಗಳು ಮತ್ತು ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಮುಂದೆ ಮಂಡಿಸಲಾಗಿತ್ತು.

ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಸಭೆಯಲ್ಲಿ, ಸಂಬಂಧಪಟ್ಟಂತೆ ಸ್ವೀಕೃತವಾಗಿದ್ದ ಸಲಹೆ / ಆಕ್ಷೇಪಣೆಗಳ ಕುರಿತು ಚರ್ಚಿಸಲಾಗಿರುತ್ತದೆ. ಅದರನ್ವಯ, ಸಭೆಯ ನಡವಳಿಯಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ರಾಜ್ಯ ಸರ್ಕಾರವು 1948ರ ಕನಿಷ್ಠ ವೇತನ ಕಾಯ್ದೆಯ (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3(1) (ಬಿ) ಮತ್ತು 5 (1) (ಬಿ) ಖಂಡದ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮತ್ತು ಈ ಹಿಂದಿನ ಎಲ್ಲಾ ಅಧಿಸೂಚನೆಗಳನ್ನು ರದ್ದುಪಡಿಸಿ, ಕರ್ನಾಟಕ ರಾಜ್ಯಾದ್ಯಂತ "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ

ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)"ಉದ್ದಿಮೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ಕನಿಷ್ಠ ವೇತನವನ್ನು ಈ ಅಧಿಸೂಚನೆಯ ಅನುಸೂಚಿಯಲ್ಲಿ ಇರುವಂತೆ ಪರಿಷ್ಕರಿಸಲಾಗಿದೆ.

"ಕನಿಷ್ಠ ವೇತನ ಕೋಷ್ಟಕ"

| | ಭಾಗ-1 : ಕ್ಷೇತ್ರ ಸಿಬ್ಬಂದಿ (Field Staff) | | | | | | | | |
|---|---|---|---|---|---|---|---|---|---|
| ಕ್ರ. ಸಂ | ಕೆಲಸದ ವರ್ಗಗಳು | ಕನಿಷ್ಠ ವೇತನ ದರಗಳು | | | | | | | |
| | | ವಲಯ-1 | | ವಲಯ-2 | | ವಲಯ-3 | | ವಲಯ-4 | |
| | | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| ಅತಿ ಕುಶಲ ಕಾರ್ಮಿಕರು | | | | | | | | | |
| 1 | ಸೆಕ್ಯೂರಿಟಿ ಆಫೀಸರ್, ಫೀಲ್ಡ್ ಆಫೀಸರ್ ಮತ್ತು ಇತರ ಅತಿಕುಶಲ ವರ್ಗದ ಕೆಲಸಕ್ಕೆ | 668.68 | 17385.63 | 636.84 | 16557.74 | 606.51 | 15769.28 | 577.63 | 15018.36 |
| ಕುಶಲ ಕಾರ್ಮಿಕರು | | | | | | | | | |
| 2 | ಸೆಕ್ಯೂರಿಟಿ ಸೂಪರ್ ವೈಸರ್, ಸೆಕ್ಯೂರಿಟಿ ಇನ್ಸ್ ಪೆಕ್ಟರ್, ಶಸ್ತ್ರಾಸ್ತ್ರ ಹೊಂದಿದ ಸಹಾಯಕ ಸೆಕ್ಯೂರಿಟಿ ಆಫೀಸರ್, ಇಂಟಲಿಜೆನ್ಸ್ ಮತ್ತು ಫೈರ್ ಪೆಟಿಂಗ್ ಮತ್ತು ಇತರೆ ಕುಶಲ ಕೆಲಸಕ್ಕೆ | 617.63 | 16058.30 | 588.22 | 15293.62 | 560.21 | 14565.35 | 533.53 | 11008.00 |
| ಅರೆ ಕುಶಲ ಕಾರ್ಮಿಕರು | | | | | | | | | |
| 3 | ಶಸ್ತ್ರಾಸ್ತ್ರ ಹೊಂದಿರದ ಸೆಕ್ಯೂರಿಟಿ ಗಾರ್ಡ್, ಹೆಡ್‌ಗಾರ್ಡ್ (ಪುರುಷ / ಮಹಿಳೆ) ಸೆಕ್ಯುರಿಟಿ ಸರ್ಚರ್, ಲಿಫ್ಟ್ ಆಪರೇಟರ್ಸ್ ಮತ್ತು ಇತರೆ ಅರೆಕುಶಲ ಕೆಲಸಕ್ಕೆ | 605.47 | 15742.26 | 576.64 | 14992.63 | 549.18 | 14278.70 | 523.03 | 13598.76 |
| ಅಕುಶಲ ಕಾರ್ಮಿಕರು | | | | | | | | | |
| 4 | ಜವಾನ, ಆಫೀಸ್ ಬಾಯ್, ಅಟೆಂಡರ್, ಹೆಲ್ಪರ್ / ಸಹಾಯಕ, ದಲಾಯತ್, ಮಜ್ದೂರ್, ಸ್ವೀಪರ್, ಕ್ಲೀನರ್ ಮತ್ತು ಇತರೆ ಅಕುಶಲ ಕೆಲಸಕ್ಕೆ | 445.77 | 11590.14 | 424.55 | 11038.23 | 404.33 | 10512.60 | 493.31 | 12825.96 |

| ಕಛೇರಿ ಸಿಬ್ಬಂದಿಗಳು ಮತ್ತು ಚಾಲಕರು | | | | | | | | |
|---|---|---|---|---|---|---|---|---|
| ಹುದ್ದೆಗಳ ವಿವರ | ವಲಯ-1 | | ವಲಯ-2 | | ವಲಯ-3 | | ವಲಯ-4 | |
| | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| ಮ್ಯಾನೇಜರ್, ಪರ್ಸನಲ್ ಆಫೀಸರ್ ಮಾರ್ಕೆಟಿಂಗ್ ಮ್ಯಾನೇಜರ್/ ಕಛೇರಿ ಮೇಲ್ವಿಚಾರಣೆಯ ತತ್ಸಮಾನ ಹುದ್ದೆ | 702.10 | 18254.90 | 668.70 | 17385.60 | 636.84 | 16557.70 | 606.51 | 15769.30 |
| ಅಸಿಸ್ಟೆಂಟ್ ಮ್ಯಾನೇಜರ್ ಅಸಿಸ್ಟೆಂಟ್ ಪರ್ಸನಲ್ ಮ್ಯಾನೇಜರ್, ಸೀನಿಯರ್ ಅಕೌಂಟೆಂಟ್ ಮತ್ತು ತತ್ಸಮಾನ ಹುದ್ದೆ. | 668.68 | 17385.63 | 636.84 | 16557.74 | 606.51 | 15769.28 | 577.63 | 15018.36 |
| ಹಿರಿಯ ಗುಮಾಸ್ತ, ಕ್ಯಾಷಿಯರ್, ಜಡ್ಜ್ಮೆಂಟ್ ರೈಟರ್, ಸ್ಟೆನೋಗ್ರಾಫರ್, ಸ್ಟೋರ್ ಕೀಪರ್, ರಿಸೆಪ್ಷನಿಸ್ಟ್, (ಸ್ವಾಗತಗಾರರು) ಮತ್ತು ತತ್ಸಮಾನ ಹುದ್ದೆ | 617.63 | 16058.30 | 588.22 | 15293.62 | 560.21 | 14565.35 | 533.53 | 11008.00 |
| ಕಿರಿಯ ಗುಮಾಸ್ತ , ಬುಕಿಂಗ್ ಗುಮಾಸ್ತ, ಕಂಪ್ಯೂಟರ್ ಆಪರೇಟರ್, ಟೈಪಿಸ್ಟ್, ಟೆಲಿಫೋನ್ ಆಪರೇಟರ್, ಡಾಟಾ ಎಂಟ್ರೀ ಆಪರೇಟರ್ ಮತ್ತು ತತ್ಸಮಾನ ಹುದ್ದೆ. | 605.47 | 15742.26 | 576.64 | 14992.63 | 549.18 | 14278.70 | 523.03 | 13598.76 |
| ಹೆವಿ ವೆಹಿಕಲ್ ಡ್ರೈವರ್, ಟ್ರ್ಯಾಕ್ಟರ್ ಡ್ರೈವರ್ ಬಹು ಆಕ್ಸೆಲ್ ಮತ್ತು ಘನ ವಾಹನ ಚಾಲಕರು, ಅರ್ಥ್ ಮೂವರ್ಸ್ ಚಾಲಕರು, ಕ್ರೇನ್ ಜೋಡಿಸಿದ ವಾಹನ ಚಾಲಕರು, ಟ್ರ್ಯಾಕ್ಟರ್ ಚಾಲಕರು, ರೋಡ್ ರೋಲರ್ ಮತ್ತು ರಸ್ತೆ ನಿರ್ಮಾಣ ಕಾಮಗಾರಿ ವಾಹನಗಳ ಚಾಲಕರು | 617.63 | 16058.30 | 588.22 | 15293.62 | 560.21 | 14565.35 | 533.53 | 11008.00 |
| ಕಾರ್ ಡ್ರೈವರ್ ಜೀಪ್ ಡ್ರೈವರ್ ಲಘು ವಾಹನ ಚಾಲಕರು, ಟಂ ಟಂ, ತ್ರಿಚಕ್ರ ವಾಹನ ಚಾಲಕರು | 605.47 | 15742.26 | 576.64 | 14992.63 | 549.18 | 14278.70 | 523.03 | 13598.76 |

ಮೇಲ್ಕಂಡ ಕನಿಷ್ಠ ವೇತನ ದರಗಳನ್ನು ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನಿಗದಿಪಡಿಸಿದ್ದು, ಈ ಎಲ್ಲಾ ಷರತ್ತುಗಳನ್ನು ಯಥಾವತ್ತಾಗಿ ಉದ್ಯೋಗದಾತರು ಪಾಲಿಸಲು ಬಾದ್ಯಸ್ಥರಿರುತ್ತಾರೆ;

1. ವ್ಯತ್ಯಾಸವಾಗುವ ತುಟ್ಟಿಭತ್ಯೆ:-

ತುಟ್ಟಿಭತ್ಯೆ ಲೆಕ್ಕಾಚಾರವನ್ನು ವರ್ಷಕ್ಕೊಮ್ಮೆ ಮಾಡಲಾಗುತ್ತದೆ. ಹಿಂದಿನ ಕ್ಯಾಲೆಂಡರ್ ವರ್ಷದ ಹನ್ನೆರಡು (12) ತಿಂಗಳುಗಳ ಗ್ರಾಹಕ ಬೆಲೆ ಸೂಚ್ಯಾಂಕಗಳ ಸರಾಸರಿ ಆಧಾರದ ಮೇಲೆ ಏಪ್ರಿಲ್ ಮೊದಲನೇ ದಿನಾಂಕದಂದು ಪ್ರತಿ ವರ್ಷ ಲೆಕ್ಕಾಚಾರ ಮಾಡತಕ್ಕದ್ದು. ಅಲ್ಲದೇ ಗ್ರಾಹಕ ಬೆಲೆ ಸೂಚ್ಯಂಕಗಳ ಸಂಖ್ಯೆಯ ವಾರ್ಷಿಕ ಸರಾಸರಿ ಆಧಾರದ ಮೇಲೆ ಹೆಚ್ಚುವರಿಯಾದ ಅಥವಾ ಕಡಿಮೆಯಾದ ಪ್ರಮಾಣವನ್ನು ಆಧರಿಸಿ ಲೆಕ್ಕ ಹಾಕಲಾಗುತ್ತದೆ. ಆದ್ದರಿಂದ ಮೊದಲ ಲೆಕ್ಕಾಚಾರವು ಗ್ರಾಹಕ ಬೆಲೆ ಸೂಚ್ಯಾಂಕದ (ಜನವರಿ 2020 ರಿಂದ ಡಿಸೆಂಬರ್ 2020) ರ ಸರಾಸರಿ ಆಧಾರದ ಮೇಲೆ 2021 ಏಪ್ರಿಲ್ 1 ನೇ ತಾರೀಖಿನಿಂದ ಜಾರಿಗೆ ಬರುತ್ತದೆ. ಗ್ರಾಹಕ ಬೆಲೆ ಸೂಚ್ಯಾಂಕ 7616 ಅಂಶಗಳಿಗಿಂತ ಹೆಚ್ಚಾಗುವ ಪ್ರತಿ ಅಂಶಕ್ಕೆ ಎಲ್ಲಾ ವರ್ಗದ ಕಾರ್ಮಿಕರಿಗೆ ದಿನ ಒಂದಕ್ಕೆ ನಾಲ್ಕು (4) ಪೈಸೆಯಂತೆ ತುಟ್ಟಿ ಭತ್ಯೆಯನ್ನು ಪಾವತಿಸತಕ್ಕದ್ದು.

ತುಟ್ಟಿಭತ್ಯೆಯನ್ನು ಲೆಕ್ಕಾಚಾರ ಮಾಡುವ ವಿಧಾನ:-

ಅ) ಮಾಸಿಕ ವೇತನವನ್ನು ಪಡೆಯುವವರು:-

*ತಿಂಗಳ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಥವಾ ಕಡಿಮೆಯಾಗುವ ಗ್ರಾಹಕ ಬೆಲೆ ಸೂಚ್ಯಾಂಕದ ಅಂಶಗಳು (ಸಿ.ಪಿ.ಐ) x ತುಟ್ಟಿಭತ್ಯೆಯ ದರ x 30 ದಿನಗಳು*

ದಿನಗೂಲಿ ಗಳಿಕೆದಾರರ ಸಂದರ್ಭದಲ್ಲಿ ಮಾಸಿಕ ವೇತನ ದರಗಳನ್ನು ಇಪ್ಪತ್ತಾರು (26) ದಿನಗಳಿಂದ ವಿಭಾಗಿಸಿ, ನಾಲ್ಕು (4) ರಜಾ ದಿನಗಳಿಗೆ ವೇತನವನ್ನು ನೀಡುವುದೂ ಸೇರಿದಂತೆ ಈ ಕೆಳಕಂಡಂತೆ ಲೆಕ್ಕ ಹಾಕತಕ್ಕದ್ದು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

ಆ) ದಿನಗೂಲಿ ವೇತನ ಪಡೆಯುವವರು :-

*ದಿನದ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಂಶಗಳು x ತುಟ್ಟಿಭತ್ಯೆಯ ದರ x 30 ದಿನಗಳು / 26*

2. ಮಹಿಳೆಯರು, ಪುರುಷರು ಮತ್ತು ತೃತೀಯ ಲಿಂಗಿಗಳು ಒಂದೇ ರೀತಿಯ ಕೆಲಸವನ್ನು ನಿರ್ವಹಿಸಿದ ಸಂದರ್ಭಗಳಲ್ಲಿ ಎಲ್ಲರಿಗೂ ಸಮಾನ ದರದ ವೇತನಗಳನ್ನು ಸಂದಾಯ ಮಾಡತಕ್ಕದ್ದು.
3. ಅಧಿಸೂಚನೆಯಲ್ಲಿ ವರ್ಗವನ್ನು ನಮೂದಿಸದೆ ಇರುವ ವರ್ಗಗಳ ಕಾರ್ಮಿಕರಿಗೆ ಅದೇ ಸ್ವರೂಪದ ಕೆಲಸ ನಿರ್ವಹಿಸುತ್ತಿರುವ ಇತರ ವರ್ಗದ ಕಾರ್ಮಿಕರಿಗೆ ಪಾವತಿ ಮಾಡುತ್ತಿರುವ ವೇತನವನ್ನು ಸಂದಾಯ ಮಾಡತಕ್ಕದ್ದು.
4. ತುಂಡು ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರ 8 ಗಂಟೆಗಳ ಕೆಲಸದ ವೇತನವು ಅದೇ ತರಹದ ಕೆಲಸ ಮಾಡುವ ಕಾರ್ಮಿಕರ ಒಂದು ದಿನದ ವೇತನಕ್ಕಿಂತ ಕಡಿಮೆ ಇರಕೂಡದು. ಒಂದು ದಿನದ ಕೆಲಸ ಎಂದರೆ 8 ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 8 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ ಅನುಗುಣವಾಗಿ ವೇತನವನ್ನು ಆ ವರ್ಗದ ದಿನದ ಅಥವಾ ತಿಂಗಳ ವೇತನದ ಆಧಾರದ ಮೇಲೆ ಲೆಕ್ಕ ಹಾಕುವುದು.
5. ಸಂಸ್ಥೆಯಲ್ಲಿ ನಿಗದಿಪಡಿಸಿರುವ ವಾರದ ರಜೆ ಅಥವಾ ಹಬ್ಬದ ರಜಾ ದಿನಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕನಿಷ್ಠ ವೇತನ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟು ಸಾಮಾನ್ಯ ವೇತನದ ಎರಡು ಪಟ್ಟು ವೇತನವನ್ನು ಪಾವತಿ ಮಾಡತಕ್ಕದ್ದು.
6. ಕೆಲಸಗಾರರು ದಿನದ ನಿಗದಿತ ಅವಧಿಗಿಂತ ಹೆಚ್ಚು ಸಮಯ ಕೆಲಸ ನಿರ್ವಹಿಸಿದಲ್ಲಿ ಅಂತಹ ಹೆಚ್ಚುವರಿ ಅವಧಿ ಕೆಲಸಕ್ಕೆ ಆತನ ವೇತನದ ಎರಡು ಪಟ್ಟು ವೇತನವನ್ನು ಪಾವತಿಸತಕ್ಕದ್ದು.

7. ಟ್ರೈನಿಗಳಿಗೆ ಆ ವರ್ಗದ ನೌಕರರು ಪಡೆಯುತ್ತಿರುವ ವೇತನದ ಪ್ರತಿಶತ 75 ರಷ್ಟು ವೇತನವನ್ನು ಶಿಷ್ಯ ವೇತನವನ್ನಾಗಿ ಪಾವತಿಸತಕ್ಕದ್ದು.

8. ನೌಕರರುಗಳ ವೇತನವನ್ನು ಚೆಕ್ ಮೂಲಕ ಪಾವತಿಸುವುದು ಅಥವಾ ನೌಕರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡತಕ್ಕದ್ದು.

9. ಒಂದು ದಿನದ ಕೆಲಸ ಎಂದರೆ ಎಂಟು (8) ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 4 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ ಅನುಗುಣವಾಗಿ ಕನಿಷ್ಠ ವೇತನವನ್ನು ಕರ್ನಾಟಕ ಕನಿಷ್ಠ ವೇತನ ನಿಯಮಗಳು, 1958ರ ನಿಯಮ 27 (4) ರನ್ವಯ ಗಂಟೆಯ ಆಧಾರದ ಮೇಲೆ ಲೆಕ್ಕ ಹಾಕುವುದು.

10. ಈ ಅಧಿಸೂಚನೆಯ ವಲಯಗಳನ್ನು ಈ ಕೆಳಕಂಡಂತೆ ವಿಂಗಡಿಸಲಾಗಿದೆ.

| | |
|---|---|
| ವಲಯ-1 | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿ ಮತ್ತು ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು |
| ವಲಯ-2 | ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳು ಮತ್ತು ಇವುಗಳಿಗೆ ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು |
| ವಲಯ-3 | ವಲಯ-2 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು. |
| ವಲಯ-4 | ವಲಯ-2 ಮತ್ತು 3 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಇತರೆ ಭಾಗಗಳು |

11. ಈ ಅಧಿಸೂಚನೆಯಲ್ಲಿ ನಮೂದಿಸಿದ ಉದ್ಯೋಗಿಗಳನ್ನು ನಾಲ್ಕು ಪ್ರವರ್ಗಗಳನ್ನಾಗಿ ವಿಂಗಡಿಸಿದ್ದು. ಪ್ರತಿ ಪ್ರವರ್ಗದ ವ್ಯಾಖ್ಯಾನವು ಕೆಳಗಿನಂತಿರುತ್ತದೆ:

i) ಅಕುಶಲ ಕಾರ್ಮಿಕರು (Un- skilled Workers)

ಅಕುಶಲ ಕಾರ್ಮಿಕರೆಂದರ ದೈಹಿಕ ಶ್ರಮದ ಆಧಾರದ ಮೇಲೆ ಕೆಲಸ ನಿರ್ವಹಿಸುವ ಕಾರ್ಮಿಕರಾಗಿದ್ದು, ವೈಯಕ್ತಿಕ ನಿರ್ಣಯ ಹಾಗೂ ಪೂರ್ವ ಅನುಭವದ ಅವಶ್ಯಕತೆಯಿಲ್ಲದ ಸರಳ ಕರ್ತವ್ಯವನ್ನು ನಿರ್ವಹಿಸುವ ಕಾರ್ಮಿಕರಾಗಿರುತ್ತಾರೆ. ಉದ್ಯೋಗ / ವೃತ್ತಿಯ ಪರಿಸರದ ಪರಿಚಯ ಮತ್ತು ದೈಹಿಕ ಶ್ರಮ ಇಲ್ಲಿ ಮುಖ್ಯ ಅಂಶವಾಗಿರುತ್ತದೆ.

ii) ಅರೆ ಕುಶಲ ಕಾರ್ಮಿಕರು (Semi Skilled Workers)

ಅರೆ ಕುಶಲ ಕಾರ್ಮಿಕರೆಂದರೆ ವೈಯಕ್ತಿಕ ನಿರ್ಣಯಕ್ಕೆ ಹೆಚ್ಚು ಅವಕಾಶವಿಲ್ಲದ ನಿರ್ದಿಷ್ಟ ನಿಯತ ಕ್ರಮದ ಪುನರಾವರ್ತನೆಯ ಕೆಲಸಗಳನ್ನು ನಿರ್ವಹಿಸುವ ಕಾರ್ಮಿಕರಾಗಿರುತ್ತಾನೆ. ಕಾರ್ಮಿಕರ ಕೆಲಸವು ನಿರ್ದಿಷ್ಟ ಮಿತಿಯನ್ನು ಹೊಂದಿದ್ದು, ಇನ್ನೊಬ್ಬ ವ್ಯಕ್ತಿಯ ತೀರ್ಮಾನಕ್ಕೆ ಅನುಗುಣವಾಗಿ ನಿರ್ವಹಿಸುವ ಕೆಲಸವಾಗಿರುತ್ತದೆ. ಹಾಗೂ ಯಂತ್ರಗಳ ಸಹಾಯದಿಂದ ನಿರ್ವಹಿಸುವ ಸರಳ ಕೆಲಸಗಳನ್ನು ಮಾಡುವವರಾಗಿರುತ್ತಾರೆ.

iii) ಕುಶಲ ಕಾರ್ಮಿಕರು (skilled Workers)

ಕುಶಲ ಕಾರ್ಮಿಕರು ತಮ್ಮ ಸ್ವಂತ ನಿರ್ಣಯ, ತೀರ್ಮಾನ ಮತ್ತು ವಿವೇಚನೆಗೆ ಒಳಪಟ್ಟು ಜವಾಬ್ದಾರಿಯುತ ಕರ್ತವ್ಯಗಳನ್ನು ನಿರ್ವಹಿಸುವ ಕಾರ್ಮಿಕರಾಗಿರುತ್ತಾರೆ. ತಮ್ಮ ವೃತ್ತಿ ಮತ್ತು ಉದ್ಯೋಗದ ಬಗ್ಗೆ ಆಳವಾದ ಮತ್ತು ಅಮೂಲಾಗ್ರ ಜ್ಞಾನವನ್ನು ಹೊಂದಿದ ಕಾರ್ಮಿಕರಾಗಿರುತ್ತಾರೆ. ಸದರಿ ಉದ್ಯೋಗ ಮತ್ತು ವೃತ್ತಿಯ ಬಗ್ಗೆ ವಿದ್ಯಾರ್ಹತೆ ಪರಿಣಿತಿ ಮತ್ತು ಅನುಭವ ಹೊಂದಿರುತ್ತಾರೆ.

Iv ) ಅತಿ ಕುಶಲ ಕಾರ್ಮಿಕರು (Highly Skilled Workers)

ಅತಿ ಕುಶಲ ಕಾರ್ಮಿಕರೆಂದರೆ ಕರ್ತವ್ಯವನ್ನು ನಿರ್ವಹಿಸಲು ದಕ್ಷತೆ ಮತ್ತು ಅತೀವ ಸಾಮರ್ಥ್ಯ ಇರುವ ಕಾರ್ಮಿಕರಾಗಿದ್ದು, ಕುಶಲ ಕಾರ್ಮಿಕರ ಸಹಿತ ಎಲ್ಲಾ ಕಾರ್ಮಿಕರ ಕರ್ತವ್ಯಗಳ ಮೇಲ್ವಿಚಾರಣೆ ನಡೆಸಿ ಪರಿಣಾಮಕಾರಿಯಾಗಿ ಫಲಿತಾಂಶವನ್ನು ಸಾಧಿಸಲು ಶಕ್ತರಾಗಿರುವ ಕಾರ್ಮಿಕರಾಗಿರುತ್ತಾರೆ ಹಾಗೂ ಸದರಿ ಉದ್ಯೋಗ ಮತ್ತು ವೃತ್ತಿಯ ಬಗ್ಗೆ ವಿಶೇಷ ಜ್ಞಾನ ಮತ್ತು ಪರಿಣಿತಿಯನ್ನು ಹೊಂದಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ. ಉಮಾದೇವಿ)
ಪೀಠಾಧಿಕಾರಿ-2,
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

PR-750

ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 133 ಎಲ್ ಡಬ್ಲ್ಯೂಎ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 08.08.2022

ಅಧಿಸೂಚನೆ

ಕರ್ನಾಟಕ ರಾಜ್ಯದಾದ್ಯಂತ, "ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸ್ಯಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ-ಇನ್‌ಫೋರ್ಸ್ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ) ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯಲ್ಲಿ ಯಾವುದೇ ಕೆಲಸದಲ್ಲಿ ತೊಡಗಿರುವ ಕಾರ್ಮಿಕರಿಗೆ ಈ ಕೆಳಕಂಡ ಕನಿಷ್ಠ ವೇತನ ಕೋಷ್ಟಕದಲ್ಲಿ ನಿರ್ದಿಷ್ಟಪಡಿಸಿರುವಂತೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಲು ರಾಜ್ಯ ಸರ್ಕಾರವು ತೀರ್ಮಾನಿಸಿದೆ. ಕನಿಷ್ಠ ವೇತನ ಕಾಯ್ದೆ 1948 (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3 (1) (ಬಿ) ಮತ್ತು 5 (1) (ಬಿ) ರಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕರಡು ಅಧಿಸೂಚನೆಯನ್ನು ಪ್ರಕಟಿಸಲಾಗಿದೆ. ಈ ಕರಡು ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾದ ದಿನಾಂಕದಿಂದ ಎರಡು (2) ತಿಂಗಳ ಅವಧಿಯೊಳಗೆ ಬಾಧಿತರಾಗುವ ವ್ಯಕ್ತಿಗಳಿಂದ ಉದ್ಯೋಗದಾತರಿಂದ/ ಉದ್ಯೋಗಿಗಳಿಂದ/ ಸಂಘ ಸಂಸ್ಥೆಗಳಿಂದ ಸಲಹೆಗಳನ್ನು ಹಾಗೂ ಆಕ್ಷೇಪಣೆಗಳನ್ನು ಸ್ವೀಕರಿಸಲಾಗುವುದು. ತದನಂತರ ಬಂದ ಸಲಹೆಗಳನ್ನು ಹಾಗೂ ಆಕ್ಷೇಪಣೆಗಳನ್ನು ಸರ್ಕಾರವು ಪರಿಗಣಿಸುವುದಿಲ್ಲ. ಈ ಕುರಿತು ಸಲಹೆಗಳು ಹಾಗೂ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಸಾರ್ವಜನಿಕರು / ಉದ್ಯೋಗದಾತರು / ಉದ್ಯೋಗಿಗಳು / ಸಂಘ ಸಂಸ್ಥೆಗಳು ಅವುಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸ ಸೌಧ, ಬೆಂಗಳೂರು-560001 / ಆಯುಕ್ತರು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029 ಇವರಿಗೆ ಸಲ್ಲಿಸಬಹುದಾಗಿರುತ್ತದೆ.

ಕನಿಷ್ಠ ವೇತನ ಕಾಯ್ದೆ 1948ರ ಕಲಂ 3(1)(ಬಿ) ಮತ್ತು 5(1)(ಬಿ)ರಡಿಯಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಕರ್ನಾಟಕ ಸರ್ಕಾರವು ಈ ಕೆಳಕಂಡ "ಕನಿಷ್ಠ ವೇತನ ಕೋಷ್ಟಕ"ದಲ್ಲಿ ನಿರ್ದಿಷ್ಟಪಡಿಸಿರುವಂತೆ, ಕರ್ನಾಟಕ ರಾಜ್ಯದಾದ್ಯಂತ ಕನಿಷ್ಠ ವೇತನ ದರಗಳು ಜಾರಿಗೆ ಬರುವಂತೆ ಈ ಮೂಲಕ ಪರಿಷ್ಕರಿಸಲು ಪ್ರಸ್ತಾಪಿಸಿದೆ.

"ಕನಿಷ್ಠ ವೇತನ ಕೋಷ್ಟಕ"

"ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸ್ಯಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ-ಇನ್‌ಫೋರ್ಸ್ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ). ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ"

| ಕ್ರ ಸಂ | ಕೆಲಸದ ವರ್ಗಗಳು | ಕನಿಷ್ಠ ವೇತನ ದರಗಳು | | | | | | | |
|---|---|---|---|---|---|---|---|---|---|
| | | ವಲಯ-1 | | ವಲಯ-2 | | ವಲಯ-3 | | ವಲಯ-4 | |
| | | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| I | ಅತಿ ಕುಶಲ ಕಾರ್ಮಿಕರು | | | | | | | | |
| 1 | ಇಂಜಿನಿಯರ್ | 660.97 | 17185.34 | 600.89 | 15623.04 | 546.26 | 14202.76 | 491.63 | 12782.48 |